ಅಗತ್ಯ ತುರ್ತು ದುರಸ್ಥಿ ಕಾಮಗಾರಿಗಳು ಕೈಗೊಳ್ಳಬೇಕಾಗಿರುವುದರಿಂದ ಈ ಬಗ್ಗೆ ಆರ್.ಓ.ಎಂ.ಟಿ (ರಿಪೇರಿ, ಒಡೆತನ, ನಿರ್ವಹಣೆ ಮತ್ತು ವರ್ಗಾವಣೆ) ಆಧಾರದ ಮೇಲೆ ಟೆಂಡರ್ ಕರೆದು ರಿಪೇರಿ ಮಾಡಿಸಲು ಕ್ರಮ ವಹಿಸಲಾಗುತ್ತಿದೆ. ಶ್ರೀ ಕೃಷ್ಣರಾಜೇಂದ್ರ ಮಾರುಕಟ್ಟೆಯಲ್ಲಿ 22 ಖಾಲಿ ಮಳಿಗೆಗಳಿದ್ದು, ಪೋಡಿಯಂ ಬ್ಲಾಕ್‌ನಲ್ಲಿ ಶೌಚಾಲಯ ನಿರ್ಮಿಸಬೇಕಾಗಿರುವುದರಿಂದ ಅಲ್ಲಿನ ತೆಂಗಿನಕಾಯಿ ವ್ಯಾಪಾರಸ್ಥರನ್ನು ಈ ಖಾಲಿ ಮಳಿಗೆಗಳಿಗೆ ಸ್ಥಳಾಂತರಿಸಲಾಗುವುದು. ಇನ್ನುಳಿದ ವಾಣಿಜ್ಯ ಸಂಕೀರ್ಣಗಳಲ್ಲಿ ಯಾವುದೇ ಮಳಿಗೆಗಳು ಖಾಲಿ ಇರುವುದಿಲ್ಲ.

ಊ) ಈ ವಾಣಿಜ್ಯ ಸಂಕೀರ್ಣಗಳಿಂದ ವಾರ್ಷಿಕ ನಿರ್ವಹಣೆಗೆ ಪಾಲಿಕೆಯಿಂದ ತಗಲುವ ವೆಚ್ಚ ರೂ. 2,80,36,490.00

1089(1548) ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ) : ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರು ನಗರದಲ್ಲಿ ವಾಣಿಜ್ಯ ಕ್ಷೇತ್ರ ವಸತಿ ಹಾಗೂ ಕೈಗಾರಿಕಾ ಕ್ಷೇತ್ರ ಎಂದು ಬಡಾವಣೆಗಳನ್ನು ಮತ್ತು ರಸ್ತೆಗಳನ್ನು ವಿಂಗಡಣೆ ಮಾಡಲಾಗಿದೆಯೇ;

ಆ) ಬೆಂಗಳೂರು ನಗರದ ಈ ಜಾಗಗಳನ್ನು ಖಾಸಗಿಯವರಿಗೆ ಲೀಸ್ ಕೊಡುವಾಗ ಬೆಂಗಳೂರು ಮಹಾನಗರ ಪಾಲಿಕೆ ಸರ್ಕಾರದ ಆಸ್ತಿ ಪರಭಾರೆ ಮಾಡುವ ಸಂದರ್ಭದಲ್ಲಿ ಅನುಸರಿಸಬೇಕಾದ ನಿಯಮಾವಳಿಗಳನ್ನು ಪಾಲಿಸುತ್ತಿದೆಯೇ;

ಇ) ಇದನ್ನು ಉಲ್ಲಂಘನೆ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಧರ್ಮಸಿಂಗ್(ಮುಖ್ಯ ಮಂತ್ರಿಗಳು) :

ಅ) ಹೌದು.

ಆ) ಹೌದು.

ಇ) ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

1093(1172) ಶ್ರೀಎನ್.ಯೋಗಿಶ್ ಭಟ್(ಮಂಗಳೂರು) : ಮಾನ್ಯ ಮುಖ್ಯ ಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪಟ್ಟಣ ಯೋಜನಾ ಪ್ರಾಧಿಕಾರಗಳು ಅಸ್ತಿತ್ವದಲ್ಲಿವೆ;

ಆ) ನೂತನ ಪಟ್ಟಣ ಯೋಜನಾ ಪ್ರಾಧಿಕಾರಗಳನ್ನು ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ;

ಇ) ಇದ್ದಲ್ಲಿ, ಅವುಗಳು ಯಾವುವು;

ಈ) ಸರ್ಕಾರದವರು ಸದರಿ ಪಟ್ಟಣ ಪ್ರಾಧಿಕಾರಗಳಿಗೆ ನೀಡುತ್ತಿರುವ ಆರ್ಥಿಕ ಸಹಾಯಧನ ಎಷ್ಟು;

ಉ) ಪಟ್ಟಣ ಯೋಜನಾ ಪ್ರಾಧಿಕಾರಗಳ ಆರ್ಥಿಕ ಸ್ಥಿತಿಗತಿಗಳ ಸುಧಾರಣೆಗಾಗಿ ಸರ್ಕಾರದವರು ಕೈಗೊಂಡ ಕ್ರಮಗಳೇನು;

ಊ) ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಸಮಗ್ರ ಸರ್ವೆ ಮಾಡುವ ವ್ಯವಸ್ಥೆ ಹಾಗೂ ಅಭಿವೃದ್ಧಿ ಯೋಜನೆಗಳ ತಯಾರಿಯ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ?